**ಕರ್ನಾಟಕ ಸರ್ಕಾರ**

ಸಂಖ್ಯೆ: ಕಂಇ 158 ಟಿಎನ್‌ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:08-04-2021.

**ಸುತ್ತೋಲೆ**

1. ಮಾನ್ಯ ಮುಖ್ಯಮಂತ್ರಿಯವರ ಟಿಪ್ಪಣಿ ಸಂಖ್ಯೆ:E-CM/2464345/2021, ದಿ:29.03.2021ರಲ್ಲಿ ಕೋವಿಡ್-19 ಸೋಂಕು ಪ್ರಸರಣ ತಡೆಗಟ್ಟುವ ಸಂಬಂಧ ವಹಿಸಬೇಕಾದ ಕ್ರಮಗಳ ಕುರಿತು ಕಾರ್ಯವಿಧಾನದಲ್ಲಿ ಏಕರೂಪತೆ ಮತ್ತು ದೃಢತೆಯನ್ನು ತರಲು ಭಾರತ ಸರ್ಕಾರವು ಅನುಸರಿಸುತ್ತಿರುವ ವಿಧಾನವನ್ನೇ ರಾಜ್ಯ ಸರ್ಕಾರವು ಪಾಲಿಸಲು ಮತ್ತು ಕಂಟೈನ್‌ಮೆಂಟ್, ಜನರ ಮತ್ತು ವಾಹನಗಳ ಸಂಚಾರ, ಗುಂಪುಗಾರಿಕೆ ನಿರ್ಬಂಧ ಹೇರುವುದು, ಅನುಮತಿ ನೀಡಿದ / ನೀಡಲಾಗದ ಚಟುವಟಿಕೆಗಳು ಮತ್ತು ಸಂಬಂಧಿತ ವಿಷಯಗಳನ್ನು ಕುರಿತು ಯಾವುದೇ ಸೂಚನೆ ಮತ್ತು ನಿರ್ದೇಶನವನ್ನು ಕಂದಾಯ ಇಲಾಖೆಯ (ವಿಪತ್ತು ನಿರ್ವಹಣೆ) ಶಾಖೆಯಿಂದ ರಾಜ್ಯ ಕಾರ್ಯಕಾರಿ ಸಮಿತಿ ಅಧ್ಯಕ್ಷರಾದ ಮುಖ್ಯ ಕಾರ್ಯದರ್ಶಿಯವರ ಸಹಿಯಲ್ಲಿ ಮಾತ್ರ ಹೊರಡಿಸುವುದು. ಅಂತಹ ಎಲ್ಲಾ ಆದೇಶಗಳನ್ನು ಮುಖ್ಯಮಂತ್ರಿಯವರ ಅನುಮೋದನೆ ಪಡೆದೆ ಹೊರಡಿಸತಕ್ಕದ್ದು. ಸದರಿ ಆದೇಶಗಳಿಗೆ ಸಂಬಂಧಿಸಿದಂತೆ ವಿವರಣೆ ನೀಡಬಹುದೆ ವಿನಹ ಹೊಸ ನಿರ್ಬಂಧಗಳನ್ನು ಹೇರಿಸುವ ಬಗ್ಗೆ ಯಾವುದೇ ಸಚಿವರಾಗಲಿ, ಅಧಿಕಾರಗಳಾಗಲಿ ಪತ್ರಿಕಾ ಹೇಳಿಕೆ ನೀಡಬಾರದೆಂದು ಸೂಚಿಸಲಾಗಿದೆ. ಮುಂದುವರೆದು, ಮುಖ್ಯ ಕಾರ್ಯದರ್ಶಿಯವರು ಹೊರಡಿಸುವಂತಹ ಆದೇಶಗಳ ಆಧಾರದ ಮೇಲೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ ಮತ್ತು ಯಾವುದೇ ಇಲಾಖೆಗಳು ನಿರ್ದಿಷ್ಟವಾದ ಪ್ರಮಾಣಿತ ಕಾರ್ಯ ವಿಧಾನ (SOP) ಹೊರಡಿಸುವುದು ಎಂದು ಸೂಚಿಸಿರುತ್ತಾರೆ.

2. ಆದಾಗ್ಯೂ, ಕೆಲವು ಜಿಲ್ಲೆಗಳ ಜಿಲ್ಲಾಡಳಿತವು ಕೋವಿಡ್-19 ಸೋಂಕು ನಿಯಂತ್ರಣ ಕುರಿತಂತೆ ಪ್ರತ್ಯೇಕ ಸಲಹೆ / ಸೂಚನೆಗಳನ್ನು ಹೊರಡಿಸುತ್ತಿರುವುದು ಕಂಡು ಬಂದಿದ್ದು, ಇದು ಮಾನ್ಯ ಮುಖ್ಯಮಂತ್ರಿಯವರು ನೀಡಿರುವ ನಿರ್ದೇಶನಕ್ಕೆ ವ್ಯತಿರಿಕ್ತವಾಗಿರುತ್ತದೆ.

3. ಈ ಹಿನ್ನೆಲೆಯಲ್ಲಿ, ರಾಜ್ಯ ಸರ್ಕಾರದ ಇಲಾಖಾ ಮುಖ್ಯಸ್ಥರು, ಜಿಲ್ಲಾಡಳಿತಗಳು, ಪ್ರಾಧಿಕಾರಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ನಗರ ಪಾಲಿಕೆಗಳು ಹಾಗೂ ಸ್ಥಳೀಯ ಸಂಸ್ಥೆಗಳು ಕೋವಿಡ್-19 ಸೋಂಕು ನಿಯಂತ್ರಣಕ್ಕೆ ಸಂಬಂಧಿತ ಯಾವುದೇ ಪ್ರತ್ಯೇಕ ಆದೇಶಗಳನ್ನು ತಮ್ಮ ಹಂತದಲ್ಲಿ ಹೊರಡಿಸತಕ್ಕದ್ದಲ್ಲ. ಈಗಾಗಲೇ ಇಂತಹ ಆದೇಶ / ಸೂಚನೆಗಳನ್ನು ಹೊರಡಿಸಿದ್ದಲ್ಲಿ ತಕ್ಷಣವೇ ಹಿಂಪಡೆಯುವುದು ಮತ್ತು ಯಾವುದೇ ನಿರ್ದಿಷ್ಟ ಪ್ರಸ್ತಾವನೆಗಳಿದ್ದಲ್ಲಿ ಅವುಗಳನ್ನು ಸರ್ಕಾರಕ್ಕೆ ಸಲ್ಲಿಸಿದ್ದಲ್ಲಿ, ಸದರಿ ಪ್ರಸ್ತಾವನೆ ಕುರಿತು ಮಾನ್ಯ ಮುಖ್ಯಮಂತ್ರಿಯವರು ಹಾಗೂ ಸರ್ಕಾರದ ಮುಖ್ಯ ಕಾರ್ಯದರ್ಶಿಯವರೊಂದಿಗೆ ಸಮಾಲೋಚಿಸಿ ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಯಿಂದ ಸೂಕ್ತ ನಿರ್ದೇಶನವನ್ನು ನೀಡಲಾಗುವುದು.

4. ಈ ಸೂಚನೆಗಳನ್ನು ಎಲ್ಲಾ ಪ್ರಾಧಿಕಾರಗಳು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

8/4/2021

**(ಎನ್. ಮಂಜುನಾಥ್ ಪ್ರಸಾದ್)**
ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ
ಸದಸ್ಯ ಕಾರ್ಯದರ್ಶಿ
ರಾಜ್ಯ ವಿಪತ್ತು ನಿರ್ವಹಣೆ ಕಾರ್ಯಕಾರಿ ಸಮಿತಿ

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.

**ಪ್ರತಿ:**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
2. ಎಲ್ಲಾ ಇಲಾಖಾ ಮುಖ್ಯಸ್ಥರು.
3. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.
4. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಮುಖ್ಯ ಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ, ಇವರ ಆಪ್ತ ಸಹಾಯಕರು.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.